**ಕರ್ನಾಟಕ ವಿಧಾನ ಪರಿಷತ್ತು**

<table>
<tr><td colspan="2">ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:</td><td>550</td></tr>
<tr><td colspan="2">ಮಾನ್ಯ ಸದಸ್ಯರ ಹೆಸರು</td><td>ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)</td></tr>
<tr><td colspan="2">ಉತ್ತರಿಸುವ ಸಚಿವರು</td><td>ಉನ್ನತ ಶಿಕ್ಷಣ ಸಚಿವರು</td></tr>
<tr><td colspan="2">ಉತ್ತರಿಸಬೇಕಾದ ದಿನಾಂಕ</td><td>20-02-2023</td></tr>
<tr><td colspan="2">ಪ್ರಶ್ನೆ</td><td>ಉತ್ತರ</td></tr>
<tr><td>(ಅ)</td><td>ರಾಜ್ಯದಲ್ಲಿರುವ ವಿಶ್ವವಿದ್ಯಾಲಯಗಳಲ್ಲಿ ತಾತ್ಕಾಲಿಕ ಬೋಧಕೇತರ ಸಿಬ್ಬಂದಿ ಮತ್ತು ಬೋಧಕ ಸಿಬ್ಬಂದಿಗಳಿಗೆ ಕಾರ್ಯಭಾರ ಇಲ್ಲದಿದ್ದರೂ ಹೆಚ್ಚಿನ ವೇತನ ಪಡೆಯುತ್ತಿರುವ ಅತಿಥಿ ಉಪನ್ಯಾಸಕರ ಹುದ್ದೆಯನ್ನು ರದ್ದುಗೊಳಿಸುತ್ತಿರುವುದು ನಿಜವೇ; ಹಾಗಿದ್ದಲ್ಲಿ, ಭರ್ತಿ ಮಾಡಿಕೊಳ್ಳುವಾಗ ವಿಶ್ವವಿದ್ಯಾಲಯದ ಆಡಳಿತ ಮಂಡಳಿಯ ಗಮನಕ್ಕೆ ಬಂದಿಲ್ಲವೇ:</td><td>ಸರ್ಕಾರದ ಪತ್ರ ಸಂಖ್ಯೆ: ಇಡಿ 145 ಯುಎನ್ಇ 2021, ದಿನಾಂಕ: 2-9-2021 ರಲ್ಲಿ ವಿಶ್ವವಿದ್ಯಾಲಯಗಳಲ್ಲಿ ಸರ್ಕಾರದ ಪೂರ್ವಾನುಮೋದನೆ ಪಡೆಯದೇ ಹಾಗೂ ಮಂಜೂರಾದ ಹುದ್ದೆಗಳಿಗಿಂತಲೂ ಹೆಚ್ಚಿನ ಸಂಖ್ಯೆಯಲ್ಲಿ ತಾತ್ಕಾಲಿಕ / ಗುತ್ತಿಗೆ / ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಂಡಿರುವ ಬೋಧಕ / ಬೋಧಕೇತರ ಸಿಬ್ಬಂದಿಗಳನ್ನು ಕೂಡಲೇ ವಿಶ್ವವಿದ್ಯಾಲಯದ ಸೇವೆಯಿಂದ ಬಿಡುಗಡೆಗೊಳಿಸುವಂತೆ, ತಪ್ಪಿದ್ದಲ್ಲಿ ಯಾವುದೇ ಮುನ್ಸೂಚನೆ ನೀಡದೆ ಶಿಸ್ತು ಕ್ರಮ ಜರುಗಿಸಲು ಕ್ರಮವಹಿಸಲಾಗುವುದೆಂದು ಎಲ್ಲಾ ವಿಶ್ವವಿದ್ಯಾಲಯಗಳಿಗೆ ನಿರ್ದೇಶನ ನೀಡಲಾಗಿರುತ್ತದೆ.</td></tr>
<tr><td>(ಆ)</td><td>ಸಂಬಂಧಪಟ್ಟ ವಿಶ್ವವಿದ್ಯಾಲಯದ ಕುಲಪತಿಗಳು ತಮ್ಮ ಮನಸೋಇಚ್ಛಾ ಸಿಬ್ಬಂದಿ ಮತ್ತು ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲು ಅಧಿಕಾರ ಇದೆಯೇ; ಇದಕ್ಕೆ ಆರ್ಥಿಕ ಇಲಾಖೆಯ ಅನುಮತಿ ಅವಶ್ಯಕತೆ ಇಲ್ಲವೇ:</td><td>ವಿಶ್ವವಿದ್ಯಾಲಯದ ಕುಲಪತಿಗಳು ತಮ್ಮ ಮನಸೋಇಚ್ಛಾ ಸಿಬ್ಬಂದಿ ಮತ್ತು ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲು ಅಧಿಕಾರ ಇರುವುದಿಲ್ಲ.<br><br>ವಿಶ್ವವಿದ್ಯಾಲಯಗಳಲ್ಲಿ ಮಂಜೂರಾದ ಹುದ್ದೆಗಳಿಗಿಂತ ಅಧಿಕ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲು ಅವಕಾಶವಿರುವುದಿಲ್ಲ. ಒಂದು ವೇಳೆ ಅವಶ್ಯವಿದ್ದಲ್ಲಿ ನಿಯಮಾನುಸಾರ ಆರ್ಥಿಕ ಇಲಾಖೆಯ ಸಹಮತಿ ಪಡೆಯುವುದು ಕಡ್ಡಾಯವಾಗಿರುತ್ತದೆ.</td></tr>
<tr><td>(ಇ)</td><td>ಪ್ರಸ್ತುತ ಇರುವ ವಿಶ್ವವಿದ್ಯಾಲಯಗಳಲ್ಲಿ ಬೋಧಕ, ಬೋಧಕೇತರ ಹಾಗೂ ಆಡಳಿತ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಅನಾವಶ್ಯಕವಾಗಿ ನೇಮಕ ಮಾಡಿಕೊಂಡು ಸರ್ಕಾರದ ಬೊಕ್ಕಸಕ್ಕೆ ನಷ್ಟವುಂಟು ಮಾಡಿರುವವರ ಮೇಲೆ ಸರ್ಕಾರ ಯಾವ ಕ್ರಮಕೈಗೊಂಡಿದೆ:</td><td>ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ, ಬೋಧಕೇತರ ಹಾಗೂ ಆಡಳಿತ ಸಿಬ್ಬಂದಿಗಳ ಸಂಖ್ಯಾ ಮಾಹಿತಿ ಈ ಕೆಳಗಿನಂತಿದೆ:<br><br><table><tr><td>ಬೋಧಕ ಹುದ್ದೆಗಳ ಸಂಖ್ಯೆ</td><td>ಬೋಧಕೇತರ ಹಾಗೂ ಆಡಳಿತ ಸಿಬ್ಬಂದಿಗಳ ಸಂಖ್ಯೆ</td></tr><tr><td>1584</td><td>3097</td></tr></table><br>ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯಡಿಯಲ್ಲಿ ಬರುವ ರಾಜ್ಯದ ಹಲವು ವಿಶ್ವವಿದ್ಯಾಲಯಗಳು 2006-07ನೇ ಸಾಲಿನಲ್ಲಿ ಯುಜಿಸಿ ಮಾರ್ಗಸೂಚಿಗಳನ್ನು ಮತ್ತು ಸರ್ಕಾರದ ಆದೇಶಗಳನ್ನು ಉಲ್ಲಂಘಿಸಿ, ಬೋಧಕ/ಬೋಧಕೇತರ ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲು ರಚಿಸಿಕೊಂಡಿರುವ ಪರಿನಿಯಮಗಳಿಗೆ ಸರ್ಕಾರದ ಅನುಮೋದನೆ ಪಡೆಯದೇ ಹುದ್ದೆಗಳನ್ನು ನೇಮಕ ಮಾಡಿಕೊಂಡಿದ್ದು, ಆ ಪ್ರಕರಣಗಳು 2016-17ನೇ ಸಾಲಿನ ಭಾರತ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ (ಸಾಮಾನ್ಯ ಮತ್ತು ಸಾಮಾಜಿಕ ವಲಯ) ವರದಿಯಲ್ಲಿನ ಬೋಧನಾ ಸಿಬ್ಬಂದಿ ನೇಮಕಾತಿ, ಪದೋನ್ನತಿ ಹಾಗೂ ವೇತನ</td></tr>
</table>

| | | |
|---|---|---|
| | | ನಿಗದಿಯ ವಿಷಯಾಧಾರಿತ ಲೆಕ್ಕಪರಿಶೋಧನಾ ಕಂಡಿಕೆ 4.1/2016-17 ರಲ್ಲಿ ಆಕ್ಷೇಪಿತವಾಗಿರುತ್ತದೆ. ಸದರಿ ಪ್ರಕರಣಗಳು ಸಾರ್ವಜನಿಕ ಲೆಕ್ಕಪತ್ರ ಸಮಿತಿಯ ಮುಂದೆ ಬಾಕಿ ಇದ್ದು, ಈ ಸಮಿತಿ ಸಭೆಗಳಲ್ಲಿ ನಡೆದ ಚರ್ಚೆಗಳಂತೆ ಕ್ರಮವಹಿಸಲಾಗುತ್ತಿದೆ.<br><br>ಮುಂದುವರೆದು, ಈ ರೀತಿಯಾಗಿ ನಿಯಮಬಾಹಿರ ನೇಮಕಾತಿ/ಬಡ್ತಿಗಳಿಗೆ, ಸರ್ಕಾರದಿಂದ ಕಡಿವಾಣ ಹಾಕಲು ಸರ್ಕಾರದ ಸುತ್ತೋಲೆ ಸಂ: ಇಡಿ 54 ಯುಎಸ್‌ವಿ 2022, ದಿನಾಂಕ: 12-09-2022 ರಲ್ಲಿ ರಾಜ್ಯದ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ವಿಶ್ವವಿದ್ಯಾಲಯಗಳು ಸರ್ಕಾದ ಆದೇಶ/ ಸುತ್ತೋಲೆ / ಪ್ರಚಲಿತ ನಿಯಮಗಳು/ ಯುಜಿಸಿಯ ಮಾರ್ಗಸೂಚಿಗಳನ್ನು ಅಳವಡಿಸಿಕೊಳ್ಳದೇ, ನಿಯಮಾನುಸಾರ ಸರ್ಕಾರದ ಅನುಮತಿ ಪಡೆದು ಹುದ್ದೆಗಳನ್ನು ಸೃಜನೆ ಮಾಡದೆ ಹಾಗೂ ಪರಿನಿಯಮಾವಳಿಯನ್ನು ರಚಿಸಿಕೊಳ್ಳದೇ ಹುದ್ದೆಗಳ ಸೃಜನೆ, ಬೋಧಕ / ಬೋಧಕೇತರ ನೌಕರರ ನೇಮಕಾತಿ, ಪದೋನ್ನತಿ, ಹುದ್ದೆಗಳ ಉನ್ನತೀಕರಣ, ವಿಷಯದ ಕುರಿತಂತೆ ರಾಜ್ಯ ಸರ್ಕಾರ ಹಾಗೂ ಕಾಲಕಾಲಕ್ಕೆ ಜಾರಗೊಳಿಸಲಾಗುವ ಯುಜಿಸಿಯ ಮಾರ್ಗಸೂಚಿಗಳನ್ನು ಅಳವಡಿಸಿಕೊಳ್ಳದೇ ನೇಮಕಾತಿ / ಮುಂಬಡ್ತಿ / ಹುದ್ದೆಗಳನ್ನು ಉನ್ನತೀಕರಣ ಹಾಗೂ ಹೆಚ್ಚುವರಿ ಬಡ್ತಿಗಳನ್ನು ನೀಡಿ, ಸರ್ಕಾರ ಹಾಗೂ ವಿಶ್ವವಿದ್ಯಾಲಯಕ್ಕೆ ಆರ್ಥಿಕ ನಷ್ಟವನ್ನು ಉಂಟು ಮಾಡಿದ್ದಲ್ಲಿ, ಅಂತಹ ಕ್ರಮಗಳು ನಿಯಮಬಾಹಿರವಾಗಿದ್ದು ಇಂತಹ ನಿರ್ಣಯಗಳನ್ನು ತೆಗೆದುಕೊಂಡವರ ವಿರುದ್ಧ ಹಾಗೂ ಜಾರಿ ಮಾಡಿದವರ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು. ಅಲ್ಲದೆ ಉಂಟಾಗುವ ಆರ್ಥಿಕ ನಷ್ಟವನ್ನು ಅವರಿಂದಲೇ ವಸೂಲಿ ಮಾಡಲಾಗುವುದು. ಇಂತಹ ನಿಯಮಬಾಹಿರ ನೇಮಕಾತಿಗೆ / ಬಡ್ತಿಗಳಿಗೆ ಸರ್ಕಾರದಿಂದ ಅಥವಾ ವಿಶ್ವವಿದ್ಯಾಲಯದ ಯಾವುದೇ ಸಹಾಯಾನುದಾನವನ್ನು ಒದಗಿಸಲಾಗುವುದಿಲ್ಲ ಅಥವಾ ಬಳಸುವಂತಿಲ್ಲ.<br><br>ಈ ಸೂಚನೆಗಳ ಉಲ್ಲಂಘನೆ / ಲೋಪಗಳಿಗೆ ಹಾಗೂ ಅದರ ಪರಿಣಾಮಗಳಿಗೆ ವಿಶ್ವವಿದ್ಯಾಲಯದ ಕುಲಪತಿ, ಕುಲಸಚಿವರು ಮತ್ತು ಹಣಕಾಸು ಅಧಿಕಾರಿ ಹಾಗೂ ಸಂಬಂಧಿಸಿದ ಅಧಿಕಾರಿ / ನೌಕರರನ್ನು ನೇರ ಹೊಣೆಗಾರರನ್ನಾಗಿ ಮಾಡಲಾಗುವುದು. ಅಲ್ಲದೇ ಯಾವುದೇ ಮುನ್ಸೂಚನೆ ನೀಡದೆ ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರಕ್ಕೆ ಶಿಸ್ತು ಕ್ರಮ ಜರುಗಿಸಲು ಶಿಫಾರಸ್ಸು ಮಾಡಲಾಗುವುದು ಎಂದು ಎಲ್ಲಾ ವಿಶ್ವವಿದ್ಯಾಲಯಗಳಿಗೆ ಸೂಚನೆ ನೀಡಲಾಗಿದೆ. |
| (ಈ) | ಬೋಧಕ, ಬೋಧಕೇತರ ಮತ್ತು ಇನ್ನಿತರೆ ಸಿಬ್ಬಂದಿಗಳಿಗೆ ಸರ್ಕಾರ ನಿಗಧಿಪಡಿಸಿರುವ ವೇತನವೆಷ್ಟು? (ಖಾಯಂ ಮತ್ತು ತಾತ್ಕಾಲಿಕ ಸಿಬ್ಬಂದಿಗಳು ಸೇರಿದಂತೆ ಪ್ರತ್ಯೇಕವಾಗಿ ಮಾಹಿತಿ ಒದಗಿಸುವುದು) | ವಿಶ್ವವಿದ್ಯಾಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಬೋಧಕ ಸಿಬ್ಬಂದಿಗಳಿಗೆ ಯುಜಿಸಿ ನಿಯಮಾನುಸಾರ ವೇತನ ಪಾವತಿಸಲಾಗುತ್ತಿದೆ. ಬೋಧಕೇತರ ಸಿಬ್ಬಂದಿಗಳಿಗೆ ರಾಜ್ಯ ಸರ್ಕಾರ ನಿಗಧಿಪಡಿಸಿರುವ ವೇತನ ಶ್ರೇಣಿಯನ್ವಯ ನಿಯಮಾನುಸಾರ ವೇತನ ಪಾವತಿಸಲಾಗುತ್ತಿದೆ.<br><br>ತಾತ್ಕಾಲಿಕ ಅತಿಥಿ ಉಪನ್ಯಾಸಕರಿಗೆ ಸಂಬಂಧಿಸಿದಂತೆ, ಯುಜಿಸಿಯು ದಿನಾಂಕ: 28-1-2019 ರಂದು ಹೊರಡಿಸಿರುವ ಮಾರ್ಗಸೂಚಿಯಲ್ಲಿ ಪ್ರತಿ ಉಪನ್ಯಾಸಕ್ಕೆ ರೂ. 1500/-ರಂತೆ ಪ್ರತಿ ತಿಂಗಳಿಗೆ ಗರಿಷ್ಠ ರೂ. 50,000/- ಗಳು ಮೀರದಂತೆ ಗೌರವ |

| | | |
|---|---|---|
| | | ಧನವನ್ನು ನಿಗದಿಪಡಿಸಲಾಗಿರುತ್ತದೆ. ಸದರಿ ಮಾರ್ಗಸೂಚಿಯನ್ವಯ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸಾರ್ವಜನಿಕ ವಿಶ್ವವಿದ್ಯಾಲಯಗಳು ಗೌರವಧನವನ್ನು ವಿದ್ಯಾರ್ಹತೆ ಹಾಗೂ ಕಾರ್ಯಭಾರಕ್ಕನುಗುಣವಾಗಿ ಪಾವತಿಸುತ್ತಿರುತ್ತವೆ. |

**ಸಂಖ್ಯೆ: ಇಡಿ 33 ಯುಎನ್‌ಇ 2023**

**(ಡಾ: ಅಶ್ವಥ್ ನಾರಾಯಣ ಸಿ.ಎನ್.)**
ಉನ್ನತ ಶಿಕ್ಷಣ, ಐಟಿ - ಬಿಟಿ, ವಿಜ್ಞಾನ
ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಮತ್ತು ಕೌಶಲ್ಯಾಭಿವೃದ್ಧಿ,
ಜೀವನೋಪಾಯ ಹಾಗೂ ಉದ್ಯಮಶೀಲತೆ ಸಚಿವರು.